# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಸ್ಥಳೀಯ ಆಡಳಿತವನ್ನು ಬಲಪಡಿಸುವ ಉದ್ದೇಶದಿಂದ **"ರಾಜೀವ್ ಗಾಂಧಿ ಪಂಚಾಯತ್ ರಾಜ್ ಫೆಲೋಶಿಪ್"** ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುವ ಕುರಿತು

**ಓದಲಾಗಿದೆ:** ಸರ್ಕಾರದ ಆದೇಶ ಸಂಖ್ಯೆ:RDPR/468/GPA/2023(1164370), ಬೆಂಗಳೂರು ದಿನಾಂಕ: 08.09.2023

**ಪ್ರಸ್ತಾವನೆ:**

ಕಲ್ಯಾಣ ಕರ್ನಾಟಕ ವ್ಯಾಪ್ತಿಯಲ್ಲಿ ಬರುವ ಜಿಲ್ಲೆಗಳ ಸ್ಥಳೀಯ ಆಡಳಿತವನ್ನು ಬಲಪಡಿಸುವ ಸಲುವಾಗಿ **"ರಾಜೀವ್ ಗಾಂಧಿ ಪಂಚಾಯತ್ ರಾಜ್ ಫೆಲೋಶಿಪ್"** ಎಂಬ ಕಾರ್ಯಕ್ರಮವನ್ನು ಪ್ರಾರಂಭಿಸಲು ಉದ್ದೇಶಿಸಲಾಗಿದ್ದು, ಈ ಜಿಲ್ಲೆಗಳ ವ್ಯಾಪ್ತಿಯ 51 ತಾಲ್ಲೂಕುಗಳಲ್ಲಿ ಪ್ರತಿ ತಾಲ್ಲೂಕಿಗೆ ಒಬ್ಬರಂತೆ, ಮಾಹೆಯಾನ ₹.60,000/- ಫೆಲೋಶಿಪ್ ಪಾವತಿ ಆಧಾರದಲ್ಲಿ **"ರಾಜೀವ್ ಗಾಂಧಿ ಪಂಚಾಯತ್ ರಾಜ್ ಫೆಲೋಶಿಪ್"** ಕಾರ್ಯಕ್ರಮದಡಿಯಲ್ಲಿ "ಫೆಲೋ"ಗಳನ್ನು 24 ತಿಂಗಳುಗಳ ಅವಧಿಗೆ ನೇಮಕಾತಿ ಮಾಡಿಕೊಳ್ಳಲು ಮೇಲೆ ಓದಲಾದ ಸರ್ಕಾರದ ಆದೇಶದಲ್ಲಿ ಮಂಜೂರಾತಿ ನೀಡಲಾಗಿರುತ್ತದೆ.

**"ರಾಜೀವ್ ಗಾಂಧಿ ಪಂಚಾಯತ್ ರಾಜ್ ಫೆಲೋಶಿಪ್"** ಕಾರ್ಯಕ್ರಮದ ಉದ್ದೇಶಗಳು, ಫೆಲೋಗಳ ಅರ್ಹತೆಗಳು, ಅನುಭವ, ಆಯ್ಕೆ ಸಮಿತಿ ಮತ್ತು ಆಯ್ಕೆ ವಿಧಾನ, ತರಬೇತಿ, ಸ್ಟೈಪೆಂಡ್, ಫೆಲೋಗಳ ಜವಾಬ್ದಾರಿಗಳು, ಮೇಲ್ವಿಚಾರಣೆ ಮತ್ತು ಮಾರ್ಗದರ್ಶನ ಹಾಗೂ ಈ ಕಾರ್ಯಕ್ರಮದ ನಿರ್ವಹಣೆಯ ಕುರಿತು ವಿವರವಾದ ಆದೇಶವನ್ನು ಹೊರಡಿಸುವುದು ಅಗತ್ಯವಾಗಿರುತ್ತದೆ. ಅದರಂತೆ ಈ ಆದೇಶ.

## ಸರ್ಕಾರದ ಆದೇಶ ಸಂಖ್ಯೆ KPRC-DEV/399/2023, ಬೆಂಗಳೂರು, ದಿನಾಂಕ:19-01-2024

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕಲ್ಯಾಣ ಕರ್ನಾಟಕ ವ್ಯಾಪ್ತಿಯಲ್ಲಿ ಬರುವ ಜಿಲ್ಲೆಗಳ ಸ್ಥಳೀಯ ಆಡಳಿತವನ್ನು ಬಲಪಡಿಸುವ ಸಲುವಾಗಿ ಪ್ರಾರಂಭಿಸಲು ಉದ್ದೇಶಿಸಲಾಗಿರುವ **"ರಾಜೀವ್ ಗಾಂಧಿ ಪಂಚಾಯತ್ ರಾಜ್ ಫೆಲೋಶಿಪ್"**ಕಾರ್ಯಕ್ರಮದ ಉದ್ದೇಶಗಳು, ಫೆಲೋಗಳ ಅರ್ಹತೆಗಳು, ಅನುಭವ, ಆಯ್ಕೆ ಸಮಿತಿ ಮತ್ತು ಆಯ್ಕೆ ವಿಧಾನ, ತರಬೇತಿ, ಸ್ಟೈಪೆಂಡ್, ಫೆಲೋಗಳ ಜವಾಬ್ದಾರಿಗಳು, ಮೇಲ್ವಿಚಾರಣೆ ಮತ್ತು ಮಾರ್ಗದರ್ಶನ ಹಾಗೂ ಈ ಕಾರ್ಯಕ್ರಮದ ನಿರ್ವಹಣೆಯ ಮಾರ್ಗಸೂಚಿಗಳನ್ನು ಈ ಕೆಳಕಂಡಂತೆ ನಿಗದಿಪಡಿಸಿ ಆದೇಶಿಸಿದೆ.

**ಕಾರ್ಯಕ್ರಮದ ಉದ್ದೇಶಗಳು:** ರಾಜೀವ್ ಗಾಂಧಿ ಪಂಚಾಯತ್ ರಾಜ್ ಫೆಲೋಶಿಪ್ ಕಾರ್ಯಕ್ರಮದ ಉದ್ದೇಶಗಳು ಕೆಳಕಂಡಂತಿವೆ.

1) ಸ್ಥಳೀಯ ಆಡಳಿತ/ ವಿಕೇಂದ್ರೀಕರಣವನ್ನು ಬಲಪಡಿಸಲು ಈ ಪ್ರದೇಶದಲ್ಲಿ ನಿರಂತರ ಸಾಮಾಜಿಕ ಆರ್ಥಿಕ ಸಮಸ್ಯೆಗಳನ್ನು ನಿಭಾಯಿಸಲು ಸ್ಥಳೀಯ ಆಡಳಿತಕ್ಕೆ ಸಹಾಯ ಮಾಡಲು ಹೊಸ ದೃಷ್ಟಿಕೋನಗಳು, ಆಲೋಚನೆಗಳು ಮತ್ತು ಚಿಂತನೆಗಳನ್ನು ನೀಡಲು ಹಾಗೂ ಸ್ಥಳೀಯ ಆಡಳಿತದಲ್ಲಿ ನಾಗರಿಕರ

ಭಾಗವಹಿಸುವಿಕೆಯನ್ನು ಹೆಚ್ಚಿಸಲು ವಿದ್ಯಾವಂತ, ತರಬೇತಿ ಪಡೆದ ಮತ್ತು ಪ್ರೇರಿತ ಯುವ ವೃತ್ತಿಪರರನ್ನು ಒದಗಿಸುವುದು.

2) ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯತಿ ಮತ್ತು ಗ್ರಾಮ ಪಂಚಾಯತಿ ಮಟ್ಟದ ಅಭಿವೃದ್ಧಿ ಚಟುವಟಿಕೆಗಳ ಅನುಷ್ಠಾನದಲ್ಲಿ ತೊಡಗಿಸಿಕೊಂಡು, ಸ್ಥಳೀಯ ಆಡಳಿತ ಮತ್ತು ಅಭಿವೃದ್ಧಿ ಉಪಕ್ರಮಗಳ ಅನುಷ್ಠಾನದ ಕುರಿತಂತೆ ಕ್ಷೇತ್ರಮಟ್ಟದ ಸ್ಥಿತಿ-ಗತಿ ಮತ್ತು ಕಲಿಕೆಗಳ ಸಂಗ್ರಹಣೆಯಲ್ಲಿ ನಿಪುಣರಾದ ಯುವ ಸಾರ್ವಜನಿಕ ನೀತಿ ವೃತ್ತಿಪರರ ಸಮೂಹವನ್ನು ಅಭಿವೃದ್ಧಿಪಡಿಸುವುದು.

**ಕಾರ್ಯಕ್ರಮದ ಅವಧಿ:** "ರಾಜೀವ್ ಗಾಂಧಿ ಪಂಚಾಯತ್ ರಾಜ್ ಫೆಲೋಶಿಪ್ ಅವಧಿಯು ಎರಡು ವರ್ಷಗಳು ಇರುತ್ತದೆ.

**ಫೆಲೋಶಿಪ್ ಅಭ್ಯರ್ಥಿಗಳ ಅರ್ಹತೆಗಳು:**

1) ಫೆಲೋಶಿಪ್‌ಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳ ವಯೋಮಿತಿಯು 32 ವರ್ಷದೊಳಗಿರಬೇಕು.

2) ಅಭ್ಯರ್ಥಿಗಳು ಸಾಮಾಜಿಕ ವಿಜ್ಞಾನಗಳಾದ ಸಮಾಜಶಾಸ್ತ್ರ ಅಥವಾ ಅರ್ಥಶಾಸ್ತ್ರ ಅಥವಾ ಗ್ರಾಮೀಣಾಭಿವೃದ್ಧಿ ಅಥವಾ ಸಮಾಜ ಕಾರ್ಯ ಅಥವಾ ಸಾರ್ವಜನಿಕ ನೀತಿ ವಿಷಯಗಳಲ್ಲಿ ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಪದವಿ ಅಥವಾ ಸ್ನಾತಕೋತ್ತರ ಪದವಿಯನ್ನು ಹೊಂದಿರಬೇಕು.

3) ಸ್ನಾತಕ ಪದವೀಧರರು ಅಭಿವೃದ್ಧಿ ವಲಯದಲ್ಲಿ ಕನಿಷ್ಠ 1-2 ವರ್ಷಗಳ ಕ್ಷೇತ್ರ ಮಟ್ಟದ ಅನುಭವ ಹೊಂದಿದ್ದಲ್ಲಿ ಮಾತ್ರ ಆಯ್ಕೆಗೆ ಪರಿಗಣಿಸಲಾಗುವುದು ಮತ್ತು ಗ್ರಾಮೀಣಾಭಿವೃದ್ಧಿಯಲ್ಲಿ ಕ್ಷೇತ್ರಮಟ್ಟದ ಅನುಭವ ಹೊಂದಿದ್ದಲ್ಲಿ ಹೆಚ್ಚುವರಿ ಅಂಕಗಳೊಂದಿಗೆ ಪರಿಗಣಿಸಲಾಗುವುದು

4) ಕ್ಷೇತ್ರ ಮಟ್ಟದ ಅನುಭವ ಹೊಂದಿರುವ ಸ್ನಾತಕೋತ್ತರ ಪದವೀಧರರನ್ನು ಕಾರ್ಯಕ್ಷಮತೆ ಮೌಲ್ಯಮಾಪನಕ್ಕೊಳಪಟ್ಟು ಆದ್ಯತೆ ನೀಡಲಾಗುವುದು.

5) M.Phil ಅಥವಾ Ph.D ಉನ್ನತ ವಿದ್ಯಾರ್ಹತೆ ಅಪೇಕ್ಷಣೀಯವಾಗಿದ್ದು, ಹೆಚ್ಚುವರಿ Weightage ಅನ್ನು ನೀಡಲಾಗುವುದು.

**ಆಯ್ಕೆ ವಿಧಾನ:**

1) ಕಲ್ಯಾಣ ಕರ್ನಾಟಕದ ಪ್ರದೇಶದ 07 ಜಿಲ್ಲೆಗಳ ಪ್ರತಿ ತಾಲ್ಲೂಕಿಗೆ ಒಬ್ಬರಂತೆ ಒಟ್ಟು 51 ಫೆಲೋಗಳನ್ನು ಆಯ್ಕೆ ಮಾಡಲಾಗುವುದು.

2) ಫೆಲೋಗಳನ್ನು ಮೆರಿಟ್ ಕಮ್ ಆಪ್ಟಿಟ್ಯೂಡ್ ಮೌಲ್ಯಮಾಪನ, ಲಿಖಿತ ಪರೀಕ್ಷೆ ಮತ್ತು ಸಂದರ್ಶನದ ಮೂಲಕ ಆಯ್ಕೆ ಮಾಡಲಾಗುವುದು.

**ಫೆಲೋಶಿಪ್ ಆಯ್ಕೆಯ ಷರತ್ತುಗಳು:**

1) ಅಭ್ಯರ್ಥಿಗಳು ಕಡ್ಡಾಯವಾಗಿ ಕನ್ನಡವನ್ನು ಮಾತನಾಡಲು, ಓದಲು ಮತ್ತು ಬರೆಯಲು ತಿಳಿದಿರಬೇಕು. ಕ್ಷೇತ್ರಮಟ್ಟದಲ್ಲಿ ಮತ್ತು ನಾಗರಿಕರೊಂದಿಗೆ ಕೆಲಸ ಮಾಡಲು ಕನ್ನಡ ಭಾಷೆಯ ಜ್ಞಾನವು ಪ್ರಮುಖ ಅವಶ್ಯಕತೆಯಾಗಿದೆ.

2) ಫೆಲೋಗಳು ಕಲ್ಯಾಣ ಕರ್ನಾಟಕ ವಿಭಾಗದ ಯಾವುದೇ ತಾಲ್ಲೂಕಿಗೆ ನಿಯೋಜಿಸಿದರೂ ಕೆಲಸ ಮಾಡಲು ಸಿದ್ಧರಿರಬೇಕು.

3) ಫೆಲೋಷಿಪ್‌ನ ಸಂಪೂರ್ಣ ಅವಧಿಯವರೆಗೆ ನಿಯುಕ್ತಿಗೊಳಿಸಲಾದ ತಾಲ್ಲೂಕಿನಲ್ಲಿಯೇ ವಾಸ್ತವ್ಯ ಮಾಡಬೇಕು ಮತ್ತು ತಾಲ್ಲೂಕು ವ್ಯಾಪ್ತಿಯ ಗ್ರಾಮ ಪಂಚಾಯತಿಗಳಿಗೆ ನಿರಂತರವಾಗಿ ಪ್ರವಾಸ ಕೈಗೊಳ್ಳುವುದು ಮತ್ತು ಗ್ರಾಮೀಣ ಪ್ರದೇಶದಲ್ಲಿ ಕೆಲಸ ಮಾಡುವುದು ಕಡ್ಡಾಯವಾಗಿರುತ್ತದೆ.

4) ಫೆಲೋಗಳು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೇಲ್ವಿಚಾರಣೆ ಮತ್ತು ನಿಯಂತ್ರಣದಲ್ಲಿ ಕಾರ್ಯನಿರ್ವಹಿಸುವುದು.

**ಆಯ್ಕೆ ಸಮಿತಿ:** ಫೆಲೋಗಳನ್ನು ಆಯ್ಕೆ ಮಾಡಲು ಈ ಕೆಳಕಂಡ ಅಧಿಕಾರಿಗಳು ಮತ್ತು ತಜ್ಞರನ್ನು ಒಳಗೊಂಡ ಆಯ್ಕೆ ಸಮಿತಿಯನ್ನು ರಚಿಸಲಾಗಿದೆ.

| | | |
|---|---|---|
| 1 | **ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು (ಪಂ.ರಾಜ್)**<br>ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ | ಸಮಿತಿಯ ಅಧ್ಯಕ್ಷರು |
| 2 | **ಆಯುಕ್ತರು**<br>ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ | ಸದಸ್ಯರು |
| 3 | **ನಿರ್ದೇಶಕರು**<br>ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ | ಸದಸ್ಯರು |
| 3 | **ಉಪ ಕಾರ್ಯದರ್ಶಿ (ಆಡಳಿತ)**<br>ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ | ಸದಸ್ಯರು |
| 4 | CRISP ಸಂಸ್ಥೆಯ ಪ್ರತಿನಿಧಿ | ಸದಸ್ಯರು |
| 5 | **ನಿರ್ದೇಶಕರು(ಅಭಿವೃದ್ಧಿ)**<br>ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ | ಸದಸ್ಯ ಕಾರ್ಯದರ್ಶಿ |

**ಫೆಲೋಶಿಪ್ ಮತ್ತು ನೇಮಕಾತಿ ಷರತ್ತುಗಳು:**

ಫೆಲೋಗಳಿಗೆ ತರಬೇತಿ ಮತ್ತು ತಾಲ್ಲೂಕಿನಲ್ಲಿ ನಿಯೋಜನೆ ಸಮಯದಲ್ಲಿ ತಿಂಗಳಿಗೆ ರೂ.60,000 ಫೆಲೋಶಿಪ್ ಮೊತ್ತ ನೀಡಲಾಗುತ್ತದೆ. ಸದರಿ ವೆಚ್ಚವನ್ನು ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯದ ಲೆಕ್ಕ ಶೀರ್ಷಿಕೆ **2515-00-101-0-09-103: ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಕಾರ್ಯಕ್ರಮ ಮತ್ತು ಇತರೆ**

**ಗ್ರಾಮೀಣಾಭಿವೃದ್ಧಿ ಚಟುವಟಿಕೆಗಳು**"ರಡಿಯಲ್ಲಿ ಭರಿಸುವುದು. ಫೆಲೋಗಳಿಗೆ ಗ್ರಾಮ ಪಂಚಾಯತಿಗಳಿಗೆ ಪ್ರಯಾಣಿಸಲು ಮಾಸಿಕ ರೂ. 1500/- ಪ್ರಯಾಣ ಭತ್ಯೆ ನೀಡಲಾಗುವುದು. ನೇಮಕಾತಿ ಆದೇಶ ನೀಡುವ ಸಮಯದಲ್ಲಿ ಫೆಲೋಶಿಪ್‌ಗೆ ಸಂಬಂಧಿಸಿದ ಇತರೆ ಷರತ್ತುಗಳನ್ನು ವಿಧಿಸಲಾಗುವುದು.

**ತರಬೇತಿ:**

1) ಆಯ್ಕೆಯಾಗುವ ಫಲೋಗಳಿಗೆ ಫೆಲೋಶಿಪ್ ಆರಂಭದಲ್ಲಿ 2 ತಿಂಗಳ ವಿಸ್ತೃತವಾದ ತರಬೇತಿ ನೀಡಲಾಗುವುದು.
2) ತರಬೇತಿಯು ಕ್ಲಾಸ್ ರೂಮ್ ಅಧಿವೇಶನಗಳು ಮತ್ತು ಕ್ಷೇತ್ರ ಭೇಟಿಗಳನ್ನು ಒಳಗೊಂಡಿರುತ್ತದೆ.
3) ಸೇವೆಯನ್ನು ಪ್ರಾರಂಭಿಸಿದ ನಂತರ ಫೆಲೋಗಳಿಗೆ ನಿಯತಕಾಲಿಕವಾಗಿ ಆರು ತಿಂಗಳಿಗೊಮ್ಮೆ ಕಾರ್ಯಾಗಾರ, ಸೆಮಿನಾರ್, ವಿಚಾರ ಸಂಕಿರಣಗಳನ್ನು ಆಯೋಜಿಸುವ ಮೂಲಕ ವಿಚಾರ ವಿಮರ್ಶೆ, ಅನುಭವ ಹಂಚಿಕೆಯ ಮೂಲಕ ಸೂಕ್ತ ಕಲಿಕಾ ವಾತಾವರಣವನ್ನು ಕಲ್ಪಿಸಲಾಗುತ್ತದೆ.

**ನಿಯೋಜನೆ:**

- ತರಬೇತಿಯ ನಂತರ, ತರಬೇತಿಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ ಫೆಲೋಗಳನ್ನು ಅವರ ಫೆಲೋಷಿಪ್ ಅವಧಿಗಾಗಿ ತಾಲ್ಲೂಕುಗಳಿಗೆ ನಿಯೋಜಿಸಲಾಗುತ್ತದೆ.
- ಫೆಲೋಗಳು ತಮಗೆ ನಿಯೋಜಿಸಲಾದ ತಾಲ್ಲೂಕುಗಳಲ್ಲಿಯೇ ವಾಸಿಸಬೇಕು ಮತ್ತು ತಾಲ್ಲೂಕು ವ್ಯಾಪ್ತಿಯ ಗ್ರಾಮ ಪಂಚಾಯತಿಗಳಲ್ಲಿ ವ್ಯಾಪಕವಾಗಿ ಪ್ರವಾಸ ಕೈಗೊಳ್ಳಬೇಕು.

**ಫೆಲೋಗಳ ಪಾತ್ರ ಮತ್ತು ಜವಾಬ್ದಾರಿಗಳು:**

ಸಾಮಾಜಿಕ, ಆರ್ಥಿಕ, ಭೌಗೋಳಿಕ ಮತ್ತು ಆಡಳಿತದ ಸನ್ನಿವೇಶಗಳನ್ನು ಅರ್ಥಮಾಡಿಕೊಂಡ ನಂತರ, ಫೆಲೋಗಳು ಈ ಕೆಳಕಂಡ ವಿವಿಧ ಉಪಕ್ರಮಗಳಲ್ಲಿ ಜಿಲ್ಲಾಡಳಿತದೊಂದಿಗೆ ಕೆಲಸ ಮಾಡಬೇಕಾಗುತ್ತದೆ.

1) ನಾಗರೀಕರು ತಾವು ಅರ್ಹರಾಗಿರುವ ಸಾರ್ವತ್ರಿಕ ಹಕ್ಕುಗಳನ್ನು ಪಡೆದುಕೊಳ್ಳುವುದನ್ನು ಖಾತ್ರಿಪಡಿಸಿಕೊಳ್ಳುವುದು.
2) ಅರ್ಹರಾದ ವ್ಯಕ್ತಿಗಳಿಗೆ ಸರ್ಕಾರದ ವಿವಿಧ ಯೋಜನೆಗಳ ಸೌಲಭ್ಯ ಮತ್ತು ಸವಲತ್ತುಗಳು ತಲುಪುತ್ತಿರುವುದನ್ನು ಖಾತ್ರಿಪಡಿಸುವುದು.
3) ಗ್ರಾಮ ಪಂಚಾಯತಿ ಆಡಳಿತದಲ್ಲಿ, ಪ್ರಮುಖವಾಗಿ ಸಮಗ್ರ ಸಹಭಾಗಿ ವಾರ್ಷಿಕ ಕ್ರಿಯಾ ಯೋಜನೆ ತಯಾರಿಕೆಯಲ್ಲಿ ಗ್ರಾಮ ಸಭೆಗಳ ಮೂಲಕ ನಾಗರಿಕರ ಭಾಗವಹಿಸುವಿಕೆ.
4) ಸ್ಥಳೀಯವಾಗಿ ಯೋಜನೆ ರೂಪಿಸಲು ಮತ್ತು ಅನುಷ್ಠಾನಗೊಳಿಸಲು ಜಿಲ್ಲಾ/ತಾಲ್ಲೂಕು/ಗ್ರಾಮ ಪಂಚಾಯತಿ ಆಡಳಿತಕ್ಕೆ ನೆರವಾಗುವಂತಹ ಸಾಮಾಜಿಕ-ಆರ್ಥಿಕ ಮತ್ತು ವಸ್ತುಸ್ಥಿತಿಗಳನ್ನು ವಿಶ್ಲೇಷಣೆ ಮಾಡುವುದು.

5) ಪರಿಶಿಷ್ಟ ಜಾತಿ/ಪಂಗಡ, ಕಡುಬಡವರು, ವಿಶೇಷಚೇತನರು, ಮಹಿಳೆಯರು, ಮಕ್ಕಳು ಮತ್ತು ಹಿರಿಯ ನಾಗರಿಕರ ಸ್ಥಿತಿಗತಿಗಳ ಅಧ್ಯಯನ ಮಾಡುವುದು.

6) MGNREGA, ICDS ನಂತಹ ರಾಜ್ಯ ಮತ್ತು ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳು ಹಾಗೂ ಇಲಾಖೆಯಿಂದ ರೂಪಿಸಲಾಗಿರುವ ಘನ ತ್ಯಾಜ್ಯ ವಿಲೇವಾರಿ, ಶಿಶುಪಾಲನಾ ಕೇಂದ್ರಗಳು, ಅರಿವು ಕೇಂದ್ರ ಮುಂತಾದ ಅಭಿವೃದ್ಧಿ ಯೋಜನೆಗಳ ಅಧ್ಯಯನ ಕೈಗೊಳ್ಳುವುದು ಮತ್ತು ಅನುಷ್ಠಾನದಲ್ಲಿ ನೆರವಾಗುವುದು.

7) ತಾಲ್ಲೂಕು ಮತ್ತು ಗ್ರಾಮ ಪಂಚಾಯಿತಿಗಳು, ಸ್ವಸಹಾಯ ಸಂಘಗಳು ಮತ್ತು ಅವುಗಳ ಒಕ್ಕೂಟಗಳು ಮತ್ತು ಪಂಚಾಯತ್ ಮಟ್ಟದಲ್ಲಿನ ಸ್ವಯಂ ಸೇವಾ ಸಂಸ್ಥೆಗಳು ಮತ್ತು ನಾಗರೀಕ ಸಂಘಟನೆಗಳೊಂದಿಗೆ ನಿಕಟವಾಗಿ ಕೆಲಸ ಮಾಡುವುದು.

8) ಸಾರ್ವಜನಿಕ ಕಾರ್ಯಕ್ರಮಗಳು ಮತ್ತು ಸೇವೆಗಳನ್ನು ಒಗ್ಗೂಡಿಸುವಿಕೆಗೆ ನೆರವು ನೀಡುವುದು.

9) ಬಡತನ ನಿರ್ಮೂಲನೆ ಮತ್ತು ಸಾಮಾಜಿಕ ಒಳಗೊಳ್ಳುವಿಕೆ ಉದ್ದೇಶ ಹೊಂದಿರುವ ಕಾರ್ಯಕ್ರಮಗಳ ಅನುಷ್ಠಾನಕ್ಕೆ ಸಹಕರಿಸುವುದು.

10) ತಮ್ಮ ಕೆಲಸದಲ್ಲಿ ಗುಣಮಟ್ಟ, ನೈತಿಕತೆ, ವಿಶ್ವಾಸಾರ್ಹತೆ ಮತ್ತು ಸಮಗ್ರತೆಗೆ ಒತ್ತು ನೀಡುವ ಮೂಲಕ ಕ್ರಿಯಾಶೀಲ ಸಂಶೋಧನೆಗಳನ್ನು (Action Research) ಕೈಗೊಳ್ಳಲು ಅಗತ್ಯ ಕೌಶಲ್ಯಗಳನ್ನು ಗಳಿಸಿಕೊಳ್ಳುವುದು.

11) ತಳಮಟ್ಟದಲ್ಲಿ ನಿರಂತರವಾಗಿ ಕಂಡು ಬರುವ ಸಮಸ್ಯೆಗಳಿಗೆ ಪರಿಹಾರಗಳನ್ನು ಕಂಡುಕೊಳ್ಳಲು ಸಹಾಯ ಮಾಡುವ ಕಾರ್ಯ ಸಂಶೋಧನಾ ಯೋಜನೆಗಳನ್ನು (Action Research Projects) ಕೈಗೊಳ್ಳುವುದು

12) ಗ್ರಾಮ ಪಂಚಾಯತಿಗಳ ಆಡಳಿತ ಮತ್ತು ಅಭಿವೃದ್ಧಿ ಉಪಕ್ರಮಗಳಲ್ಲಿ ನೆರವಾಗುವ "ಅಭಿವೃದ್ಧಿ ವೃತ್ತಿಪರ" ರಾಗಿ ಗುರುತಿಸಿಕೊಳ್ಳುವುದು.

13) ಗ್ರಾಮ ಪಂಚಾಯತಿಗಳ ದೈನಂದಿನ ಆಡಳಿತವು ಶಾಸನಾತ್ಮಕ ಕಾರ್ಯವಿಧಾನ ಮತ್ತು ಪ್ರಕ್ರಿಯೆಗಳಿಗೆ ಅನುಗುಣವಾಗಿ ನಡೆಯುವುದನ್ನು ಹಾಗೂ ಸೇವೆಗಳ ವಿತರಣೆಯ ಪರಿಣಾಮಕತೆ ಮತ್ತು ನಿರಂತರತೆಯನ್ನು ಮೌಲ್ಯಮಾಪನ ಮಾಡುವುದು.

14) ಚುನಾಯಿತ ಪ್ರತಿನಿಧಿಗಳು, ಅಧಿಕಾರಿಗಳು, ಮಹಿಳೆಯರು ಮತ್ತು ಮಕ್ಕಳು ಸೇರಿದಂತೆ ಸಾರ್ವಜನಿಕರೊಂದಿಗೆ ಕೇಂದ್ರೀಕೃತ ಗುಂಪು ಚರ್ಚೆ (Focus Group Discussions) ನಡೆಸುವ ಮೂಲಕ ಗ್ರಾಮ ಪಂಚಾಯತಿಗಳ ಅವಶ್ಯಕತೆಗಳನ್ನು ಗುರುತಿಸುವುದು ಮತ್ತು ಅರ್ಥೈಸಿಕೊಳ್ಳುವುದು.

15) ಮೇಲ್ಕಂಡ ಚಟುವಟಿಕೆಗಳನ್ನು ಕೈಗೊಳ್ಳಲು ಫೆಲೋಗಳು ಗ್ರಾಮ ಪಂಚಾಯತಿ ಕಾರ್ಯನಿರ್ವಹಣೆ ಶ್ರೇಣೀಕರಣ (Gram Panchayat Performance Ranking) ನಲ್ಲಿ ಕೊನೆಯಲ್ಲಿರುವ 10 ಗ್ರಾಮ ಪಂಚಾಯತಿಗಳನ್ನು ಆಯ್ಕೆ ಮಾಡಿಕೊಳ್ಳಬೇಕು.

**ಮೇಲ್ವಿಚಾರಣೆ ಮತ್ತು ಮಾರ್ಗದರ್ಶನ:**

ಫೆಲೋಗಳು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ನೇರ ಮೇಲ್ವಿಚಾರಣೆಯಲ್ಲಿ ಕಾರ್ಯನಿರ್ವಹಿಸುವುದು. ದೈನಂದಿನ ಕೆಲಸಕ್ಕಾಗಿ, ಅವರು ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು, ಗ್ರಾಮ ಪಂಚಾಯಿತಿ ಅಧಿಕಾರಿಗಳು, ಸಿಬ್ಬಂದಿ ಮತ್ತು ಚುನಾಯಿತ ಪ್ರತಿನಿಧಿಗಳು ಸೇರಿದಂತೆ ವಿವಿಧ ಹಂತದ ಅಧಿಕಾರಿಗಳೊಂದಿಗೆ ಸಮನ್ವಯದೊಂದಿಗೆ ಕಾರ್ಯನಿರ್ವಹಿಸುವುದು.

ಫೆಲೋಗಳಿಗೆ ಆಡಳಿತ, ಶೈಕ್ಷಣಿಕ, ಗ್ರಾಮೀಣಾಭಿವೃದ್ಧಿ ಮತ್ತು ಸಾರ್ವಜನಿಕ ನೀತಿ ಹಾಗೂ ಆಡಳಿತದಲ್ಲಿ ಅನುಭವ ಹೊಂದಿರುವ ಬಾಹ್ಯ ಸ್ವಯಂಸೇವಕ ಮಾರ್ಗದರ್ಶಕರ (Mentor) ನೆರವು ಒದಗಿಸಿಕೊಡಲಾಗುವುದು. ಫೆಲೋಗಳಿಗೆ ಅಗತ್ಯವಿರುವ ಮಾರ್ಗದರ್ಶನವನ್ನು ಒದಗಿಸಲು expert ಸಂಸ್ಥೆಗಳಿಂದ ಜ್ಞಾನ ಪಾಲುದಾರರಾಗಿ ಆಹ್ವಾನಿಸಲಾಗುವುದು.

**ಫೆಲೋಷಿಪ್ ಕಾರ್ಯಕ್ರಮದ ನಿರ್ವಹಣೆ:**

ಫೆಲೋಷಿಪ್ ಕಾರ್ಯಕ್ರಮದ ಕಾರ್ಯನಿರ್ವಹಣೆಯನ್ನು ಮೇಲ್ವಿಚಾರಣೆ ಮತ್ತು ಉಸ್ತುವಾರಿ ಮಾಡಲು "ಯೋಜನಾ ನಿರ್ವಹಣಾ ಘಟಕ"ವನ್ನು (PMU-Project Monitoring Unit) ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರಿನಲ್ಲಿ ಸ್ಥಾಪಿಸಲಾಗುವುದು.

**Centre for Research in Schemes and Policies (CRISP) ಸಂಸ್ಥೆಯ ಪಾತ್ರ ಮತ್ತು ಜವಾಬ್ದಾರಿಗಳು:**

1) ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯದ ಪರವಾಗಿ ಫೆಲೋಗಳ ಆಯ್ಕೆಗಾಗಿ ಅಭ್ಯರ್ಥಿಗಳಿಂದ ಆನ್ ಲೈನ್ ಮೂಲಕ ಅರ್ಜಿಗಳನ್ನು ಸ್ವೀಕರಿಸುವುದು, ಅರ್ಜಿಗಳ ಪರಿಶೀಲನೆ ಮತ್ತು ಅರ್ಹ ಅಭ್ಯರ್ಥಿಗಳ ಶಾರ್ಟ್ ಲಿಸ್ಟ್ ತಯಾರಿಸುವುದು.
2) ಫೆಲೋಗಳ ತರಬೇತಿ ವಿನ್ಯಾಸವನ್ನು ಸಿದ್ಧಪಡಿಸುವುದು, ಸಂಪನ್ಮೂಲ ವ್ಯಕ್ತಿಗಳನ್ನು ಗುರುತಿಸುವುದು ಮತ್ತು ತರಬೇತಿ ನಿರ್ವಹಣೆ.
3) ಫೆಲೋಗಳಿಗೆ ತಾಂತ್ರಿಕ, ಸಮನ್ವಯ ಮತ್ತು ಸಮಾಲೋಚನೆ ನೆರವು ಒದಗಿಸುವುದು.

(ಆಯುಕ್ತರು)
ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ,
ಬೆಂಗಳೂರು.

**ಪ್ರತಿಯನ್ನು:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಆಪ್ತ ಕಾರ್ಯ ದರ್ಶಿಗಳು, ವಿಕಾಸ ಸೌಧ, ಬೆಂಗಳೂರು.

2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು(ಪಂ.ರಾಜ್), ರವರ ಆಪ್ತ ಕಾರ್ಯದರ್ಶಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯರವರ ಆಪ್ತ ಸಹಾಯಕರು, ಗಾಂಧಿನಗರ, ಬೆಂಗಳೂರು